# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 09.07.2010**

## ಪಾಲಿಕೆ ಆಯುಕ್ತರಿಂದ ಪಶ್ಚಿಮ ವಲಯದ ವಿವಿಧ ಅಭಿವೃದ್ಧಿ ಕಾಮಗಾರಿಗಳ ತಪಾಸಣೆ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ಇಂದು ಡಾ|| ರಾಜ್‌ಕುಮಾರ್ ವಾರ್ಡ್-106 ನಲ್ಲಿರುವ ಡಾ|| ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದ ತಪಾಸಣೆಯನ್ನು ಕೈಗೊಂಡು ಕ್ರೀಡಾಂಗಣದ ನಿರ್ವಹಣೆಯನ್ನು ಪರಿಶೀಲಿಸಿ, ಕೆಲವು ಸ್ಥಳೀಯ ಸಾರ್ವಜನಿಕರು ಕ್ರೀಡಾಂಗಣದ ಕೋಣೆಗಳನ್ನು ಅನಧಿಕೃತವಾಗಿ ಉಪಯೋಗಿಸುತ್ತಿರುವುದನ್ನು ಗಮನಿಸಿ ಕೂಡಲೇ ತೆರವುಗೊಳಿಸಿ ಕೊಠಡಿಗಳನ್ನು ಪಾಲಿಕೆಯ ವಶಕ್ಕೆ ತೆಗೆದುಕೊಳ್ಳಲು ಸಂಬಂಧಿಸಿದ ಕಾರ್ಯಪಾಲಕ ಅಭಿಯಂತರರಿಗೆ ಸೂಚಿಸಿದರು.

ಪಾಲಿಕೆ ಆಯುಕ್ತರು ಇಂದು ಪಶ್ಚಿಮ ವಲಯದ ತಪಾಸಣೆ ಕೈಗೊಂಡು ಮಲ್ಲೇಶ್ವರಂ ಮಾರುಕಟ್ಟೆಯಲ್ಲಿ ಸ್ಥಾಪಿಸಿರುವ ಸಾವಯವ ತ್ಯಾಜ್ಯ ಪರಿವರ್ತನೆ ಘಟಕಕ್ಕೆ ಭೇಟಿ ನೀಡಿ ಮಾರುಕಟ್ಟೆಯಲ್ಲಿ ಉತ್ಪತ್ತಿಯಾಗುವ ತ್ಯಾಜ್ಯದಿಂದ ಸಾವಯವ ಗೊಬ್ಬರವನ್ನು ತಯಾರಿಸುವ ಪ್ರಕ್ರಿಯೆಯನ್ನು ಪರಿಶೀಲಿಸಿ, ಇದೊಂದು ಉತ್ತಮ ಮತ್ತು ಮಾದರಿ ಉಪಕ್ರಮವಾಗಿದ್ದು, ಮುಂಬರುವ ದಿನಗಳಲ್ಲಿ ಪ್ರತಿ ವಾರ್ಡ್‌ನಲ್ಲಿಯೂ ಕೂಡ ಇಂತಹ ಘಟಕಗಳನ್ನು ಸ್ಥಾಪಿಸಲು ವಲಯ ಅಧಿಕಾರಿಗಳಿಗೆ ಸೂಚಿಸಿದರು.

ಇಂತಹ ಘಟಕಗಳ ಸ್ಥಾಪನೆಯಿಂದ ತ್ಯಾಜ್ಯ ವಿಲೇವಾರಿಯ ಸಾರಿಗೆ ವೆಚ್ಚ, ಕಸ ವಿಲೇವಾರಿ (ಡಂಪಿಂಗ್ ಯಾರ್ಡ್) ಸ್ಥಳಕ್ಕೆ ಕೊಂಡುಯ್ಯುವ ಕಸದ ಪ್ರಮಾಣದಲ್ಲಿ ಗಣನೀಯವಾಗಿ ಕಡಿಮೆ ಮಾಡುವುದು ಹಾಗೂ ತಯಾರಿಸಿರುವ ಸಾವಯವ ಗೊಬ್ಬರವನ್ನು ಪಾಲಿಕೆಯ ಉದ್ಯಾನವನಗಳಲ್ಲಿ ಉಪಯೋಗಿಸಬಹುದಾಗಿದ್ದು, ಇದರಿಂದ ನಗರ ಎದರಿಸುತ್ತಿರುವ ತ್ಯಾಜ್ಯ ವಿಲೇವಾರಿ ಸಮಸ್ಯೆಗೆ ಸೂಕ್ತ ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ತದನಂತರ, ಮಲ್ಲೇಶ್ವರಂನ ಪ್ರೊ. ಸಿ.ಎನ್.ಆರ್. ರಾವ್ ವೃತ್ತದಲ್ಲಿ 30 ಕೋಟಿರೂ ಅಂದಾಜು ವೆಚ್ಚದಲ್ಲಿ ನಿರ್ಮಾಣ ಮಾಡುತ್ತಿರುವ ಅಂಡರ್‌ಪಾಸ್ ಕಾಮಗಾರಿಯ ಪ್ರಗತಿಯನ್ನು ಪರಿಶೀಲಿಸಿ, ಈ ಕಾಮಗಾರಿಯನ್ನು ನಿಗಧಿಪಡಿಸಲಾಗಿರುವ ಡಿಸೆಂಬರ್ 2010ರ ಅವಧಿಯ ಒಳಗಾಗಿ ಪೂರ್ಣಗೊಳಿಸಲು ಗುತ್ತಿಗೆದಾರರಿಗೆ ಹಾಗೂ ಸಂಬಂಧಪಟ್ಟ ಅಭಿಯಂತರರಿಗೆ ಕಟ್ಟುನಿಟ್ಟಿನ ಆದೇಶ ನೀಡಿದರು.

ಪಾಲಿಕೆಯ 22.75 ಆಯವ್ಯಯ ಅಡಿಯಲ್ಲಿ ಮತ್ತಿಕೆರೆಯಲ್ಲಿ 80 ಮನೆಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಪ್ರತಿ ಮನೆಗೆ 3 ಲಕ್ಷ ರೂಗಳಂತೆ ಒಟ್ಟು 2.40 ಕೋಟಿ ರೂಗಳ ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿರುವ ಕಟ್ಟಡ ಕಾಮಗಾರಿಯನ್ನು ಪರಿಶೀಲಿಸಿ, ಈ ಯೋಜನೆಯಡಿಯಲ್ಲಿರುವ ಇನ್ನೂ ಹಲವು ಕಲ್ಯಾಣ ಕಾರ್ಯಕ್ರಮಗಳ ಮೂಲಕ ಆರ್ಥಿಕ ಸವಲತ್ತುಗಳನ್ನು ಫಲಾನುಭವಿಗಳಿಗೆ ಮುಟ್ಟುವಂತೆ ಕ್ರಮಕೈಗೊಳ್ಳಲು ಸಂಬಂಧಪಟ್ಟ ವಲಯ ಜಂಟಿ ಆಯುಕ್ತರಿಗೆ ಸೂಚಿಸಿದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** ದಿನಾಂಕ: 09.07.2010

## ***ಪಾಲಿಕೆಯಿಂದ ರೂ.80 ಕೋಟಿ ವೆಚ್ಚದಲ್ಲಿ ಎರಡು ಬಹುಮಹಡಿ ವಾಹನ ನಿಲ್ದಾಣ ಸಂಕೀರ್ಣ ನಿರ್ಮಾಣ***

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಸಾರ್ವಜನಿಕರ ವಾಹನ ನಿಲುಗಡೆಗೆ ಅವಕಾಶ ಕಲ್ಪಿಸಲು ಹಾಗೂ ವಾಹನಗಳು ಮತ್ತು ಪಾದಚಾರಿಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲು ಅಧಿಕ ಜನಸಾಂದ್ರತೆ ಹಾಗೂ ವಾಹನ ದಟ್ಟಣೆಯಿಂದ ಕೂಡಿದ ಪ್ರದೇಶಗಳಾದ ಗಾಂಧಿನಗರದ ಕಾಳಿದಾಸ ರಸ್ತೆಯ ಸ್ವಾತಂತ್ರ್ಯ ಉದ್ಯಾನವನದ ಒಂದು ಭಾಗದಲ್ಲಿ ಹಾಗೂ ರಸೆಲ್ ಮಾರುಕಟ್ಟೆಯ ಹತ್ತಿರ ಇರುವ ಪಾಲಿಕೆಯ ಖಾಲಿ ನಿವೇಶನದಲ್ಲಿ ಅಂದಾಜು ರೂ.80 ಕೋಟಿ ವೆಚ್ಚದಲ್ಲಿ ಎರಡು ಬಹುಮಹಡಿ ವಾಹನ ನಿಲ್ದಾಣ ಸಂಕೀರ್ಣಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ಸದರಿ ಕಾಮಗಾರಿಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳಿಂದ ಅನುದಾನ ಕೋರಲಾಗಿದ್ದು, ಈ ಸಂಕೀರ್ಣಗಳಲ್ಲಿ ಸುಮಾರು 1643 ನಾಲ್ಕು ಚಕ್ರ ಹಾಗೂ 600 ದ್ವಿಚಕ್ರ ವಾಹನಗಳ ನಿಲುಗಡೆಗೆ ಅವಕಾಶ ಕಲ್ಪಿಸಲಾಗುವುದು ಎಂದು ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 09.07.2010**

ಕರ್ನಾಟಕ ಉದ್ಯಾನವನಗಳು, ಆಟದ ಮೈದಾನಗಳು ಮತ್ತು ತೆರೆದ ಪ್ರದೇಶಗಳ (ರಕ್ಷಣೆ ಮತ್ತು ಕ್ರಮಬದ್ಧಗೊಳಿಸುವಿಕೆ) ಕಾಯ್ದೆ 1985ರ ಅಡಿ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಉದ್ಯಾನವನಗಳು, ಆಟದ ಮೈದಾನಗಳು, ಖಾಲಿ ಪ್ರದೇಶಗಳ ವಿವರಗಳನ್ನೊಳಗೊಂಡ ಅಧಿಸೂಚನೆಯನ್ನು ದಿನಾಂಕ: 03.05.2010 ರಂದು ಮತ್ತು 08.06.2010 ರಂದು ಕರ್ನಾಟಕ ರಾಜ್ಯ ಪತ್ರ ವಿಶೇಷ ಪತ್ರಿಕೆಯಲ್ಲಿ ಪ್ರಕಟಿಸಲಾಗಿರುತ್ತದೆ ಹಾಗೂ ಪಾಲಿಕೆಯ ಎಲ್ಲಾ ವಲಯ ಕಛೇರಿಗಳ ಸೂಚನಾ ಫಲಕದಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲಾಗುತ್ತದೆ. ಸಾರ್ವಜನಿಕರು ಈ ಅಧಿಸೂಚನೆ ಬಗ್ಗೆ ಸಲಹೆ / ಆಕ್ಷೇಪಣೆಗಳಿದ್ದಲ್ಲಿ ಸಂಬಂಧಪಟ್ಟ ವಲಯ ಜಂಟಿ ಆಯುಕ್ತರ ಕಛೇರಿ ಅಥವಾ ಅಪರ ಆಯುಕ್ತರು (ಆಸ್ತಿಗಳು) ರವರ ಕಛೇರಿಗೆ ದಿನಾಂಕ: 07.09.2010ರ ಒಳಗೆ ಸಲ್ಲಿಸಲು ಈ ಮೂಲಕ ಕೋರಿದೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** ದಿನಾಂಕ: 09.07.2010

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 8 ವಲಯಗಳಲ್ಲಿ ಚಿಕೂನ್ ಗುನ್ಯಾ ಮತ್ತು ಡೆಂಗ್ಯೂ ಬಗ್ಗೆ ಎಲ್ಲಾ ತರಹದ ನಿಯಂತ್ರಣ ಕಾರ್ಯಕ್ರಮಗಳನ್ನು ಮಹಾನಗರ ಪಾಲಿಕೆಯು ಹಮ್ಮಿಕೊಂಡಿರುತ್ತದೆ. ಮಳೆಗಾಲ ಬರುವ ಮುಂಚೆಯೇ ವಲಯವಾರು, ಸ್ಪ್ರೇಯಿಂಗ್ ಕಾರ್ಯಕ್ರಮ, ಸೊಳ್ಳೆ ಉತ್ಪತ್ತಿತಾಣಗಳ ನಿರ್ಮೂಲನಾ ಕಾರ್ಯಕ್ರಮ, ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ, ಇತ್ಯಾದಿಗಳನ್ನು ಮುಂಜಾಗ್ರತೆ ಕ್ರಮವಾಗಿ ಹಮ್ಮಿಕೊಳ್ಳಲಾಗಿದೆ.

ಪಾಲಿಕೆಯ 8 ವಲಯದ ಆರೋಗ್ಯ ವೈದ್ಯಾಧಿಕಾರಿಗಳಿಗೆ ಸಲಕರಣೆ ಹಾಗೂ ಸಿಬ್ಬಂದಿಗಳನ್ನು ಗುತ್ತಿಗೆ ಆಧಾರದ ಮೇಲೆ ನಿಯೋಜಿಸಿಕೊಂಡು ಮೇಲ್ಕಂಡ ಕಾರ್ಯಕ್ರಮಗಳನ್ನು ಜರುಗಿಸಲು ಆದೇಶ ನೀಡಲಾಗಿದೆ.

ಪಾಲಿಕೆಯ ಆರೋಗ್ಯ ಇಲಾಖೆಯ 8 ವಲಯಗಳ ಆರೋಗ್ಯಾಧಿಕಾರಿಗಳು, ಉಪ ಆರೋಗ್ಯಾಧಿಕಾರಿಗಳು, ಎಲ್ಲಾ ಹೆರಿಗೆ ಆಸ್ಪತ್ರೆಯ ವೈದ್ಯರು ಹಾಗೂ ಆರೋಗ್ಯ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಹೆಚ್ಚಿನ ರೀತಿಯಲ್ಲಿ ಮುತುವರ್ಜಿ ವಹಿಸಿ, ಕಾರ್ಯನಿರ್ವಹಿಸಲು ಸೂಚಿಸಲಾಗಿದೆ. ಸಾರ್ವಜನಿಕರು ಸಹಕರಿಸಬೇಕೆಂದು ಮುಖ್ಯ ಆರೋಗ್ಯಾಧಿಕಾರಿಯವರು ಕೋರಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ಸಾರ್ವಜನಿಕರು ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ: 22660000 / 9480683515.

**ಸಾರ್ವಜನಿಕ ಸಂಪರ್ಕಾಧಿಕಾರಿ**